# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1658 (1823) |
| ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23-03-2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಯಾದಗಿರಿ ನಗರದಲ್ಲಿ 50 ಹಾಸಿಗೆಯ ಆಯುಷ್ ಆಸ್ಪತ್ರೆ ನಿರ್ಮಿಸಲು ಸರ್ಕಾರ ಮುಂದಾಗಿದೆಯೇ; | 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 126 ರಲ್ಲಿ ಯಾದಗಿರಿ ಜಿಲ್ಲಾ ಆಸ್ಪತ್ರೆಯಲ್ಲಿ ಆಯುಷ್ ವಿಭಾಗವನ್ನು ಪ್ರಾರಂಭಿಸುವ ಹೊಸ ಯೋಜನೆಯನ್ನು ಘೋಷಿಸಲಾಗಿದೆ. 2022-23 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವ ಯೋಜನೆಗಳನ್ನು ಅನುಷ್ಠಾನಗೊಳಿಸುವ ಉದ್ದೇಶದಿಂದ ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ ಆಯುಷ್ ವಿಭಾಗವನ್ನು ಪ್ರಾರಂಭಿಸಲು ತಾತ್ವಿಕ ಅನುಮೋದನೆ ನೀಡಲಾಗಿದೆ. |
| (ಆ) | ಯಾದಗಿರಿ ನಗರದಲ್ಲಿ ಆಯುಷ್ ಆಸ್ಪತ್ರೆ ನಿರ್ಮಿಸುವುದಾದಲ್ಲಿ, ಯಾವ ಜಾಗದಲ್ಲಿ ನಿರ್ಮಿಸಲಾಗುವುದು ಹಾಗೂ ಇದಕ್ಕೆ ಎಷ್ಟು ಎಕರೆ ಜಮೀನು ಮಂಜೂರು ಮಾಡಲಾಗಿದೆ; (ವಿವರ ನೀಡುವುದು) | ಯಾದಗಿರಿ ಜಿಲ್ಲಾ ಕೇಂದ್ರದಲ್ಲಿ 50 ಹಾಸಿಗೆಗಳ ಆಯುಷ್ ಸಂಯುಕ್ತ ಆಸ್ಪತ್ರೆಯನ್ನು ಪ್ರಾರಂಭಿಸಲು 05 ಎಕರೆ ಜಮೀನನ್ನು ಗುರುತಿಸಿ ಇಲಾಖೆಗೆ ಉಚಿತವಾಗಿ ಮಂಜೂರು ಮಾಡಿ ಹಸ್ತಾಂತರಿಸುವಂತೆ ಕೋರಿ ದಿನಾಂಕ:29-03-2022 ರಂದು ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ ರವರಿಗೆ ಪತ್ರ ಬರೆಯಲಾಗಿತ್ತು. ಅದರಂತೆ ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ ಇವರು ದಿನಾಂಕ:28-02-2023 ರಂದು ಆಯುಷ್ ಸಂಯುಕ್ತ ಆಸ್ಪತ್ರೆ ನಿರ್ಮಾಣಕ್ಕಾಗಿ ಯಾದಗಿರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಸರ್ವೆ ನಂ. 267 ರಲ್ಲಿ 2 ಎಕರೆ 17 ಗುಂಟೆ ಮತ್ತು ಸರ್ವೆ ನಂ. 268 ರಲ್ಲಿ 2 ಎಕರೆ 1 ಗುಂಟೆ, ಒಟ್ಟು ಸೇರಿ 04 ಎಕರೆ 18 ಗುಂಟೆ ಜಮೀನನ್ನು ಮಂಜೂರು ಮಾಡಿರುತ್ತಾರೆ. ಆದರೆ, ಸರ್ಕಾರದ ಪತ್ರ ಸಂಖ್ಯೆ ಆಕುಕ 118 ಪಿಐಎಂ 2022, ದಿನಾಂಕ: 22-06-2023 ರಲ್ಲಿ ಸದರಿ ಪ್ರಸ್ತಾವನೆಯನ್ನು ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮಿತಿಯೊಳಗೆ ಅನುಷ್ಠಾನಗೊಳಿಸಲು ಸಾಧ್ಯವಿರದ ಕಾರಣ ಕೈಬಿಡುವಂತೆ ತಿಳಿಸಲಾಗಿದೆ. |
| (ಇ) | ಆಯುಷ್ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ನಿಗದಿ ಮಾಡಿರುವ ಅನುದಾನ ಎಷ್ಟು ಹಾಗೂ ಎಂದಿನಿಂದ ಆಯುಷ್ ಆಸ್ಪತ್ರೆಯ ಕಾಮಗಾರಿ ಪ್ರಾರಂಭಿಸಲಾಗುವುದು? (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

**ಸಂಖ್ಯೆ: ಆಕುಕ 74 ಪಿಟಿಡಿ 2026**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು